343

I/117819/2021

ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ,
ಬೆಂಗಳೂರು-560001, ದಿ:11-08-2021

-: ಸುತ್ತೋಲೆ :-

ವಿಷಯ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಹಲವಾರು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿರುವ ಸಂಬಂಧ ಮಾಹಿತಿ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಪತ್ರ ಸಂಖ್ಯೆ: ಇಡಿ 01 ಟಿಪಿಇ 2021, ದಿನಾಂಕ:07-01-2021
2. ಸರ್ಕಾರದ ಪತ್ರ ಸಂಖ್ಯೆ: ಯುಸಕ್ರೀ 63 ಅಮುಕಾ 2020, ದಿನಾಂಕ:16-12-2020
3. ಈ ಕಛೇರಿ ಸುತ್ತೋಲೆ ಸಂಖ್ಯೆ:ಡಿಟಿಇ-ಸಿಡಿಸಿ೦ಎಲ್.ಆರ್.ಡಿ.ಸಿ/2/2021, ದಿನಾಂಕ:20-01-2021.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳನ್ವಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಯೋಜನೆಗಳ ಅನುಷ್ಠಾನದಲ್ಲಿ ಯುವಜನರ ಸಮಗ್ರ ವ್ಯಕ್ತಿತ್ವ ವಿಕಸನಕ್ಕೆ ಅನೇಕ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ. ಪ್ರಮುಖವಾದ ಯೋಜನೆಗಳನ್ನು ಉಲ್ಲೇಖ(2)ರ ಪತ್ರದಲ್ಲಿ ವಿವರವಾದ ವಿವರಣೆಯನ್ನು ನೀಡಲಾಗಿದೆ.(ಪ್ರತಿ ಲಗತ್ತಿಸಿದೆ)

ಈ ಸಂಬಂಧ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯೊಂದಿಗೆ ತಾಂತ್ರಿಕ ಶಿಕ್ಷಣ ಇಲಾಖೆ ಕೈಜೋಡಿಸಿ, ನಿರಂತರವಾಗಿ ಕಾರ್ಯ ನಿರ್ವಹಿಸಬೇಕಾಗಿರುತ್ತದೆ ಮತ್ತು ಈ ಸಾಧನೆಯನ್ನು ನಿಗಧಿತ ಚೌಕಟ್ಟಿನಲ್ಲಿ ರೂಪಿಸಿಕೊಳ್ಳಬೇಕಾಗಿರುವುದರಿಂದ ಈ ಇಲಾಖೆಗಳು ಒಡಂಬಡಿಕೆ (MOU) ಮಾಡಿಕೊಳ್ಳಬೇಕಾಗಿರುತ್ತದೆ ಮತ್ತು ಈ ಒಡಂಬಡಿಕೆಯಲ್ಲಿ ಕ್ರೀಡಾ ವಿದ್ಯಾರ್ಥಿಗಳು ಒಳಗೊಂಡಂತೆ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳು ಒಳಪಡುತ್ತವೆ.

ಉಲ್ಲೇಖ(3)ರ ಈ ಕಛೇರಿ ಸುತ್ತೋಲೆ ಪ್ರಕಾರ 16 ಸಂಸ್ಥೆಗಳಿಂದ ಮಾತ್ರ ಮಾಹಿತಿ ನೀಡಿರುವುದು ಕಂಡು ಬಂದಿರುತ್ತದೆ. ಆದರೆ 2019-20ನೇ ಸಾಲಿನ 43ನೇ ರಾಜ್ಯಮಟ್ಟದ ಅಂತರ ಪಾಲಿಟೆಕ್ನಿಕ್ ಕ್ರೀಡಾದಲ್ಲಿ ರಾಜ್ಯದ 27 ಜಿಲ್ಲೆಗಳಿಂದ 53 ಸರ್ಕಾರಿ, 18 ಅನುದಾನಿತ ಮತ್ತು 13 ಖಾಸಗಿ (ಒಟ್ಟು 84) ಪಾಲಿಟೆಕ್ನಿಕ್ ಗಳಿಂದ 757 ಪುರುಷ ವಿದ್ಯಾರ್ಥಿಗಳು, 290 ವಿದ್ಯಾರ್ಥಿನಿಯರು ಮತ್ತು 12 ವಿಶೇಷಚೇತನ ವಿದ್ಯಾರ್ಥಿಗಳು ಸೇರಿ ಒಟ್ಟು 1059 ವಿದ್ಯಾರ್ಥಿಗಳು ಮತ್ತು 125 ಸಿಬ್ಬಂದಿ ವರ್ಗದವರು ಭಾಗವಹಿಸಿರುವುದು ಇರುತ್ತದೆ.

ಈ ಹಿನ್ನಲೆಯಲ್ಲಿ ವಿದ್ಯಾರ್ಥಿಗಳು ಕ್ರೀಡೆಗಳಲ್ಲಿ ಪ್ರಥಮ ಸ್ಥಾನ/ಪದಕ ಪಡೆದಿದ್ದಲ್ಲಿ ಆ ವರ್ಷದ ಸಾಧನೆಗೆ ರೂ. 10,000/- ವಾರ್ಷಿಕ ವೇತನ, ಪೂರ್ವ ಬೋಧಕ ಶುಲ್ಕವನ್ನು ಮರುಪಾವತಿ ಮಾಡುವುದು, ಪ್ರತಿ ಸರ್ಕಾರಿ ಸಂಸ್ಥೆಗೆ ಅಗತ್ಯವಿರುವ ಕ್ರೀಡಾ ಸಾಮಗ್ರಿಗಳನ್ನು ಪೂರೈಸಲು ರೂ. 90,000/- ಅನುದಾನ, ಸರ್ಕಾರಿ ಕಾಲೇಜುಗಳಿಗೆ ತಲಾ ರೂ. 15 ಲಕ್ಷ ವೆಚ್ಚದಲ್ಲಿ ಕ್ರೀಡಾಪಟುಗಳ/ವಿದ್ಯಾರ್ಥಿಗಳ ದೈಹಿಕ ಸಾಮರ್ಥ್ಯದ ವೃದ್ಧಿಗೆ ಅಗತ್ಯ ಜಿಮ್ ಉಪಕರಣಗಳನ್ನು ಒದಗಿಸಲಾಗುತ್ತದೆ ಮತ್ತು ಇತರ ಇನ್ನೂ ಅನೇಕ ಪುರಸ್ಕಾರಗಳನ್ನು ಮತ್ತು ವಿದ್ಯಾರ್ಥಿಗಳಿಗೆ ತರಬೇತಿಗಳನ್ನು ನೀಡಲಾಗುತ್ತದೆ ಹಾಗೂ ದೈಹಿಕ ಶಿಕ್ಷಕರಿಗೆ ರೂ. 10,000/- ಪ್ರೋತ್ಸಾಹಧನವನ್ನು ನೀಡಲಾಗುತ್ತದೆ.

--2

ಆದುದರಿಂದ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ **ವಿದ್ಯಾರ್ಥಿಗಳು ಕ್ರೀಡೆಯಲ್ಲಿ ಸಾಧನೆ ಮಾಡುವ ಸಾಮರ್ಥ್ಯವುಳ್ಳ/ಉತ್ತಮ ಸಾಧನೆ ಮಾಡಿರುವ** ಪ್ರತಿಭಾವಂತ ಕ್ರೀಡಾಪಟುಗಳ ಮತ್ತು ಪದಕ ವಿಜೇತರುಗಳ ಹಾಗೂ ಕಾರ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಕರುಗಳ ಮಾಹಿತಿಯನ್ನು ಕೊಟ್ಟಿರುವ ಲಿಂಕ್‌ನ್ನು ಉಪಯೋಗಿಸಿ, Google Form ನ್ನು ಭರ್ತಿ ಮಾಡಿ ದಿನಾಂಕ:25-08-2021 ರೊಳಗೆ ಕಡ್ಡಾಯವಾಗಿ ಇಲಾಖೆಗೆ ಸಲ್ಲಿಸಲು ಎಲ್ಲಾ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ ಮತ್ತೊಮ್ಮೆ ಈ ಮೂಲಕ ಸೂಚಿಸಲಾಗಿದೆ.

ಮುಂದುವರೆದು, ಸದರಿ ವಿಷಯಕ್ಕೆ ಸಂಬಂಧಿಸಿದಂತೆ, ಮಾಹಿತಿ ನೀಡದೇ ಇರುವ ಸಂಸ್ಥೆಗಳ ಪ್ರಾಚಾರ್ಯರು ಮುಂದಿನ ದಿನಗಳಲ್ಲಿ ನಡೆಯುವ ರಾಜ್ಯಮಟ್ಟದ ಅಂತರ ಪಾಲಿಟೆಕ್ನಿಕ್ ಕ್ರೀಡಾಕೂಟದಲ್ಲಿ ಯಾವುದೇ ರೀತಿಯ ತಾಂತ್ರಿಕ ಸಮಸ್ಯೆಗಳು ಉಂಟಾಗದಂತೆ ಎಚ್ಚರಿಕೆ ವಹಿಸಬೇಕೆಂದು ಹಾಗೂ ಮುಂದೆ ನಡೆಯುವ ರಾಜ್ಯಮಟ್ಟದ ಅಂತರ ಪಾಲಿಟೆಕ್ನಿಕ್ ಕ್ರೀಡಾದ ಸಾಧಕ ಬಾಧಕಗಳಿಗೆ ಮತ್ತು ಈ ಒಡಂಬಡಿಕೆಗೆ ವಂಚಿತರಾದ ಸಂಸ್ಥೆಯ ಪ್ರಾಚಾರ್ಯರು ಹೊಣೆಗಾರರಾಗುತ್ತಾರೆಂದು ಸಹ ತಿಳಿಸಲಾಗಿದೆ.

ಜಂಟಿ ನಿರ್ದೇಶಕರು(ಸಿಡಿಸಿ)

ಇವರಿಗೆ:-

1. ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.
2. ಇ-ಆಡಳಿತ, ತಾಂ.ಶಿ.ನಿ, ಬೆಂಗಳೂರು ಇವರಿಗೆ ಡಿ.ಟಿ.ಇ ವೆಬ್ ಸೈಟ್ ನಲ್ಲಿ ಪ್ರಕಟಿಸುವುದು.
3. ಎಲ್ ಆರ್ ಡಿಸಿ ಕಡತಕ್ಕೆ

204149/2020

14

# ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಕಚೇರಿ

## ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ


ಕೊಠಡಿ ಸಂ. 242, 2ನೇ ಮಹಡಿ
ಬಹುಮಹಡಿಗಳ ಕಟ್ಟಡ
ದೂರವಾಣಿ ಸಂ. 080-22032589
22255827
ಫ್ಯಾಕ್ಸ್ ಸಂಖ್ಯೆ : 22252499


LRDC


ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಆಪ್ತ ಶಾಖೆ
ಸಂಖ್ಯೆ 1382(24)
ದಿನಾಂಕ 08 JAN 2021


ಸಂಖ್ಯೆ: ಯುಸಕ್ರೀ 63 ಅಮುಕಾ 2020 ದಿನಾಂಕ: 16-12-2020

ಮಾನ್ಯರೇ,

**ವಿಷಯ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಯೋಜನೆಗಳ ಅನುಷ್ಠಾನದಲ್ಲಿ ಶಿಕ್ಷಣ ಇಲಾಖೆಯೊಂದಿಗೆ MoU ಮಾಡಿಕೊಳ್ಳುವ ಕುರಿತು

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ರಾಜ್ಯದಲ್ಲಿ ಕ್ರೀಡಾ ಕ್ಷೇತ್ರದ ಬೆಳವಣಿಗೆಗೆ ಮತ್ತು ಕ್ರೀಡಾಪಟುಗಳು ಉನ್ನತ ಸಾಧನೆಗೆ ಪೂರಕವಾಗುವ ಹಲವಾರು ಯೋಜನೆಗಳನ್ನು ಅನುಷ್ಠಾನ ಗೊಳಿಸುತ್ತಿದೆ. ಅದೇ ರೀತಿ ಯುವಜನರ ಸಮಗ್ರ ವ್ಯಕ್ತಿತ್ವ ವಿಕಸನಕ್ಕೆ ಯುವ ನೀತಿ ಅಡಿ ಹಲವಾರು ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸುತ್ತಿದೆ. ಪ್ರಮುಖ ಯೋಜನೆಗಳ ವಿವರ ಕೆಳಕಂಡಂತಿದೆ.

1. **ಕ್ರೀಡಾ ವಿದ್ಯಾರ್ಥಿ ವೇತನ:**
   ಹಿರಿಯ ಮಾಧ್ಯಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶೈಕ್ಷಣಿಕ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಮಾನ್ಯತೆ ಪಡೆದ ರಾಜ್ಯ ಮಟ್ಟದ ಕ್ರೀಡಾಕೂಟಗಳಲ್ಲಿ ಪ್ರಥಮ ಸ್ಥಾನ ಪಡೆದಿದ್ದಲ್ಲಿ ಅಥವಾ ಮಾನ್ಯತೆ ಪಡೆದ ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಪದಕ ಪಡೆದಿದ್ದಲ್ಲಿ ಆ ವರ್ಷದ ಸಾಧನೆಗೆ ರೂ 10,000/- ಗಳ ವಾರ್ಷಿಕ ವಿದ್ಯಾರ್ಥಿ ವೇತನಕ್ಕೆ ಅರ್ಹರಾಗುತ್ತಾರೆ.
2. **ಶೈಕ್ಷಣಿಕ ಶುಲ್ಕ ಮರುಪಾವತಿ:**
   ಮಾನ್ಯತೆ ಪಡೆದ ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಪದಕ ಪಡೆದ ಕ್ರೀಡಾಪಟುಗಳ ಪೂರ್ಣ ಬೋಧಕ ಶುಲ್ಕವನ್ನು ಮರುಪಾವತಿ ಮಾಡುವುದು (ಈಜು ಮತ್ತು ಜಿಮ್ನಾಸ್ಟಿಕ್ಸ್ ಕ್ರೀಡೆಗಳಿಗೆ 5 ನೇ ತರಗತಿಯಿಂದ ಹಾಗೂ ಇನ್ನುಳಿದ ಕ್ರೀಡೆಗಳಿಗೆ ಪ್ರಥಮ ಪಿ.ಯು.ಸಿ ಯಿಂದ ಉನ್ನತ ಶಿಕ್ಷಣದವರೆಗೆ)
3. **ನಗದು ಪುರಸ್ಕಾರ:**
   ಒಲಂಪಿಕ್ಸ್, ಏಷಿಯನ್ ಗೇಮ್ಸ್, ಕಾಮನವೆಲ್ತ್ ಗೇಮ್ಸ್, ವರ್ಲ್ಡ್ ಚಾಂಪಿಯನಷಿಪ್/ಗೇಮ್ಸ್, ರಾಷ್ಟ್ರೀಯ ಕ್ರೀಡಾಕೂಟ, ರಾಷ್ಟ್ರೀಯ ಚಾಂಪಿಯನ್ ಷಿಪ್ ಗಳಲ್ಲಿ ಪದಕ ವಿಜೇತರಾದ ರಾಜ್ಯದ ಕ್ರೀಡಾಪಟುಗಳಿಗೆ ಸರ್ಕಾರದ ಮಾರ್ಗಸೂಚಿಗಳನುಸಾರ ನಗದು ಪುರಸ್ಕಾರ ನೀಡಲಾಗುತ್ತಿದೆ.
4. **ಕ್ರೀಡಾ ಶ್ರೇಷ್ಠತೆ ಅಕಾಡೆಮಿ:**
   ಅಂತರಾಷ್ಟ್ರ ಮಟ್ಟದಲ್ಲಿ ಸಾಧನೆ ಮಾಡುವ ಸಾಮರ್ಥ್ಯ ಹೊಂದಿರುವ ಪ್ರತಿಭಾನ್ವಿತ ಕ್ರೀಡಾಪಟುಗಳಿಗೆ ತರಬೇತಿ, ಕ್ರೀಡಾಕಿಟ್, ಪೌಷ್ಟಿಕತೆ, ಫಿಟ್ನೆಸ್, ವೈದ್ಯಕೀಯ ವೆಚ್ಚ ಮತ್ತು ಪಂದ್ಯಾವಳಿಗಳಲ್ಲಿ ಭಾಗವಹಿಸಲು ತಗಲುವ ವೆಚ್ಚಗಳ ಸಂಬಂಧ ಪ್ರೋತ್ಸಾಹ ಧನದ ಮೊತ್ತವನ್ನು ಸಮಿತಿಯ ಮೂಲಕ ಆಯ್ಕೆ ಮಾಡಿ ನೀಡಲಾಗುತ್ತಿದೆ.
5. ಸರ್ಕಾರಿ ಶಾಲೆಗಳಲ್ಲಿ ಕ್ರೀಡಾ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಲು ಕ್ರೀಡಾ ಸಾಮಗ್ರಿಗಳನ್ನು ಒದಗಿಸಲಾಗುತ್ತಿದೆ.
6. **ನಮ್ಮೂರ ಶಾಲೆಗೆ ನಮ್ಮ ಯುವಜನರು:**
   ಈ ಯೋಜನೆಯಡಿ ಕ್ರೀಡೆಯಲ್ಲಿ ಉತ್ತಮ ಸಾಧನೆ ಮಾಡಿರುವ ಅಥವಾ ಸಾಧನೆ ಮಾಡುವ ಸಾಮರ್ಥ್ಯವುಳ್ಳ ಪ್ರತಿಭಾನ್ವಿತ ಕ್ರೀಡಾಪಟುಗಳು ಇರುವ ಪ್ರತಿ ತಾಲೂಕಿನ ಒಂದು ಸರ್ಕಾರಿ ಶಾಲೆಗೆ ಅಗತ್ಯ ಕ್ರೀಡಾ ಸಾಮಗ್ರಿಗಳನ್ನು ಪೂರೈಸಿಕೊಳ್ಳಲು ರು 90,000/- ಅನುದಾನ ಹಾಗು ಆ ಶಾಲೆಯ ದೈಹಿಕ ಶಿಕ್ಷಕರಿಗೆ ರೂ 10,000/- ಪ್ರೋತ್ಸಾಹಧನ ನೀಡಲಾಗುತ್ತಿದೆ.

7. **ಯುವ ಸ್ಪಂದನ:**
ಯುವಜನರ ಹಾಗೂ ಮಕ್ಕಳ ಮಾನಸಿಕ ಆರೋಗ್ಯ ವಿಷಯಗಳಿಗೆ ಸಂಬಂಧಿಸಿದಂತೆ ಅರಿವು ಮೂಡಿಸಲು ಮತ್ತು ನೆರವು ನೀಡಲು ನಿಮ್ಹಾನ್ಸ್ ಸಂಸ್ಥೆಯ ಸಹಯೋಗದಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಪ್ರತಿ ಜಿಲ್ಲೆಯಲ್ಲಿ ಜಿಲ್ಲಾ ಕ್ರೀಡಾಂಗಣದಲ್ಲಿ ಯುವ ಸ್ಪಂದನ ಕೇಂದ್ರವಿದ್ದು, ನೆರವು ಪಡೆಯಬಹುದಾಗಿದೆ.

8. **ಕ್ರೀಡಾ ಶಾಲೆ/ನಿಲಯಗಳು:**
ಪ್ರತಿ ಜಿಲ್ಲಾ ಕೇಂದ್ರದಲ್ಲಿ ಇಲಾಖೆಯು ಪ್ರತಿಭಾನ್ವಿತ ಕ್ರೀಡಾಪಟುಗಳನ್ನು ಗುರುತಿಸಿ, ವೈಜ್ಞಾನಿಕ ತರಬೇತಿ ನೀಡಿ ಪೋಷಿಸಲು ಕ್ರೀಡಾಶಾಲೆ/ನಿಲಯಗಳನ್ನು ಹೊಂದಿದೆ. ಈ ಕ್ರೀಡಾಪಟುಗಳಿಗೆ ಉಚಿತ ವಸತಿ, ಪೌಷ್ಠಿಕ ಆಹಾರ, ಕ್ರೀಡಾಕಿಟ್, ವೈದ್ಯಕೀಯ/ಪ್ರಯಾಣ ವೆಚ್ಚ ನೀಡಲಾಗುತ್ತಿದೆ. ಪ್ರತಿ ವರ್ಷ ಡಿಸೆಂಬರ್ ಮತ್ತು ಜನವರಿ ಮಾಹೆಯಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಕ್ರೀಡಾಪಟುಗಳ ಆಯ್ಕೆ ಶಿಬಿರಗಳನ್ನು ಆಯೋಜಿಸಲಾಗುತ್ತದೆ. ಈ ಕ್ರೀಡಾಪಟುಗಳು ರಾಜ್ಯ, ರಾಷ್ಟ್ರ ಮತ್ತು ಅಂತಾರಾಷ್ಟ್ರ ಮಟ್ಟದಲ್ಲಿ ಸಾಧನೆ ಮಾಡಿರುತ್ತಾರೆ.

9. **ಯುವ ಶಕ್ತಿ ಕೇಂದ್ರ:**
ರಾಜ್ಯದ ಕ್ರೀಡಾಂಗಣಗಳು ಹಾಗೂ ಸರ್ಕಾರಿ ಕಾಲೇಜುಗಳಿಗೆ ಈ ಯೋಜನೆಯಡಿಯಲ್ಲಿ ತಲಾ ರೂ 15.00 ಲಕ್ಷ ವೆಚ್ಚದಲ್ಲಿ ಕ್ರೀಡಾಪಟುಗಳ/ವಿದ್ಯಾರ್ಥಿಗಳ ದೈಹಿಕ ಸಾಮರ್ಥ್ಯ ವೃದ್ಧಿಗೆ ಅಗತ್ಯ ಜಿಮ್ ಉಪಕರಣಗಳನ್ನು ಒದಗಿಸಲಾಗುತ್ತಿದೆ.

10. **ಕ್ರೀಡಾಂಗಣಗಳಲ್ಲಿ ಕ್ರೀಡಾ ಸೌಲಭ್ಯ ಸೃಜನೆ ಮತ್ತು ತರಬೇತಿ:**
ಎಲ್ಲಾ ಕ್ರೀಡಾಂಗಣಗಳಲ್ಲಿ ಅಗತ್ಯ ಕ್ರೀಡಾ ಮೂಲಭೂತ ಸೌಲಭ್ಯಗಳನ್ನು ಸೃಜಿಸಲಾಗಿದ್ದು, ನುರಿತ ತರಬೇತುದಾರರಿಂದ ಕ್ರೀಡಾ ತರಬೇತಿ ನೀಡಲಾಗುತ್ತಿದೆ.

11. **ದೈಹಿಕ ಶಿಕ್ಷಕರಿಗೆ ತರಬೇತಿ:**
ಶಿಕ್ಷಣ ಇಲಾಖೆಯ ದೈಹಿಕ ಶಿಕ್ಷಕರಿಗೆ ಜಿಲ್ಲಾ ಮಟ್ಟದಲ್ಲಿ ಕ್ರೀಡಾ ಪ್ರತಿಭೆಯನ್ನು ಗುರುತಿಸುವಿಕೆ, ಕ್ರೀಡಾ ವಿಜ್ಞಾನ, ತಂತ್ರಜ್ಞಾನ, ಆನಾಲಿಟಿಕ್ಸ್, ಮತ್ತು ಕ್ರೀಡಾ ಜಗತ್ತಿನ ಪ್ರಸ್ತುತ ಉತ್ತಮ ಅಭ್ಯಾಸಗಳ ಬಗ್ಗೆ ತರಬೇತಿ (STEAM-Science, Technology, Engineering, Analytics, Medicine ಸೇರಿದಂತೆ) ನೀಡುವುದು.

12. **ಫಿಟ್ ಇಂಡಿಯಾ ಯೋಜನೆ:**
ಭಾರತ ಸರ್ಕಾರದ ಫಿಟ್ ಇಂಡಿಯಾ ಯೋಜನೆಯಡಿ ಶಾಲೆ ಮತ್ತು ದೈಹಿಕ ಶಿಕ್ಷಕರನ್ನು ನೋಂದಣಿ ಮಾಡಿಕೊಳ್ಳಲು ಮತ್ತು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸಂಬಂಧಪಟ್ಟವರಿಗೆ ಸೂಚಿಸುವುದು.

13. ಸರ್ಕಾರದಿಂದ ಅನುಮೋದಿತಗೊಂಡಿರುವ **ರಾಜ್ಯ ಕ್ರೀಡಾ ನೀತಿಯ** ಅನುಚ್ಛೇದ-1 ರಲ್ಲಿ ಅಡಕವಾಗಿರುವ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಅಂಶಗಳನ್ನು ಜಾರಿಗೊಳಿಸಲು ಅಗತ್ಯ ಕ್ರಮ ವಹಿಸುವುದು.

ಈ ಎಲ್ಲ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದಲ್ಲಿ ಶಿಕ್ಷಣ ಇಲಾಖೆಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಮತ್ತು ಕಾರ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ. ಈ ಸಂಬಂಧ ಪ್ರತಿಭಾವಂತ ಕ್ರೀಡಾಪಟುಗಳ ಮತ್ತು ದೈಹಿಕ ಶಿಕ್ಷಕರ ವಿವರಗಳನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ನೀಡುವುದು ಅಗತ್ಯವಾಗಿದೆ. ಆದುದರಿಂದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮತ್ತು ಶಿಕ್ಷಣ ಇಲಾಖೆಗಳು ಕೈಜೋಡಿಸಿ ಕಾರ್ಯ ನಿರ್ವಹಿಸಲು ಮತ್ತು ನಿರಂತರವಾಗಿ ಸಮನ್ವಯ ಸಾಧಿಸಲು ನಿಗದಿತ ಚೌಕಟ್ಟನ್ನು ರೂಪಿಸಿ ಈ ಸಂಬಂಧ MoU (ಒಡಂಬಡಿಕೆ)ಮಾಡಿಕೊಳ್ಳುವುದು ಅಗತ್ಯವಾಗಿದೆ. ಆದುದರಿಂದ ಈ ಸಂಬಂಧ ಕ್ರಮ ಕೈಗೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಲು ಕೋರಿದೆ.

ತಮ್ಮ ವಿಶ್ವಾಸಿ

(ಡಾ|| ಶಾಲಿನಿ ರಜನೀಶ್, ಭಾ.ಆ.ಸೇ)
**ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ**
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ
ಕರ್ನಾಟಕ ಸರ್ಕಾರ

**ಇವರಿಗೆ,**
ಶ್ರೀ ಜಿ. ಕುಮಾರ ನಾಯಕ. ಭಾ.ಆ.ಸೇ.
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ
ಬಹುಮಹಡಿ ಕಟ್ಟಡ, ಬೆಂಗಳೂರು